RNU AIR DHARWAD

# JANUARY 20, 2025
# AKASHAVANI - DHARWAD
# PRADESH SAAMACHARA (KANNADA) 7.05 A.M

ಮುಖ್ಯಾಂಶಗಳು

- ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಸ್ವಾವಲಂಬಿಯಾಗಿ ಸಾಗುತ್ತಿರುವ ಭಾರತದ ಸಾಧನೆ ಶ್ಲಾಘನೀಯ – ಪ್ರಧಾನಮಂತ್ರಿ ನರೇಂದ್ರ ಮೋದಿ.
- ನಾಡಿನ ಸಂಸ್ಕೃತಿಯ ಅರಿವು ಹಾಗೂ ಸೌಹಾರ್ದತೆ ಹೆಚ್ಚಿಸುವಲ್ಲಿ ಗ್ರಾಮೀಣ ಕ್ರೀಡೆಗಳ ಪಾತ್ರ ಮಹತ್ವದ್ದು – ಸಚಿವ ಸತೀಶ್ ಜಾರಕಿಹೊಳಿ.
- ಮೈಕ್ರೋ ಫೈನಾನ್ಸ್ ಕಂಪನಿಗಳ ದಬ್ಬಾಳಿಕೆ ನಿಯಂತ್ರಿಸಿ, ಶಾಶ್ವತ ಪರಿಹಾರ ಕೈಗೊಳ್ಳುವಂತೆ, ಮುಖ್ಯಮಂತ್ರಿಯವರಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ ಒತ್ತಾಯ.
- ಪುರುಷರ ಹಾಗೂ ಮಹಿಳೆಯರ ಚೊಚ್ಚಲ ಖೋ–ಖೋ ವಿಶ್ವ ಕಪ್ ಭಾರತದ ಮಡಿಲಿಗೆ.

ಈಗ ವಾರ್ತೆಗಳ ವಿವರ

ಭಾರತವು ಬಾಹ್ಯಾಕಾಶ ಕ್ಷೇತ್ರದಲ್ಲಿ 2025 ರ ಪ್ರಾರಂಭದಲ್ಲಿಯೇ ಅನೇಕ ಐತಿಹಾಸಿಕ ಸಾಧನೆಗಳನ್ನು ಮಾಡಿದೆ. ಭಾರತದ ಸಾಧನೆ ಪ್ರಶಂಸನೀಯ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. 118ನೇ ಆವೃತ್ತಿಯ ಮನ್ ಕಿ ಬಾತ್‌ನಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಬೆಂಗಳೂರಿನ ಭಾರತೀಯ ಬಾಹ್ಯಾಕಾಶ ತಂತ್ರಜ್ಞಾನದ ಸ್ಟಾರ್ಟ್–ಅಪ್ **Pixxel**, ಭಾರತದ ಮೊದಲ ಖಾಸಗಿ ಉಪಗ್ರಹ ಸಮೂಹ ‘ಫೈರ್‌ಫ್ಲೈ’ ಅನ್ನು ಯಶಸ್ವಿಯಾಗಿ ಉಡಾವಣೆ ಮಾಡಿತ್ತು ಎಂಬ ವಿ ’ಯ ತಮ್ಮೊಂದಿಗೆ ಹಂಚಿಕೊಳ್ಳಲು ಹೆಮ್ಮೆ ಎನಿಸುತ್ತದೆ ಎಂದರು.

ಧ್ವನಿ– ಪ್ರಧಾನಮಂತ್ರಿ(57 ಸೆಕೆಂದುಗಳು)

ಎರಡು ಬಾಹ್ಯಾಕಾಶ ನೌಕೆಗಳಿಗೆ ಬಾಹ್ಯಾಕಾಶದಲ್ಲಿ ಸಂಪರ್ಕ ಕಲ್ಪಿಸುವ, ಸ್ಪೇಸ್ ಡಾಕಿಂಗ್ ತಂತ್ರಜ್ಞಾನವು ಬಾಹ್ಯಾಕಾಶ ನಿಲ್ದಾಣಕ್ಕೆ ಅವಶ್ಯಕ ವಸ್ತುಗಳ ಸರಬರಾಜಿಗೆ ಮತ್ತು ಸಿಬ್ಬಂದಿ ಕಾರ್ಯಾಚರಣೆಗಳಲ್ಲಿ ಪ್ರಮುಖ ಪಾತ್ರವಹಿಸಿದೆ. ಈ ಸಾಧನೆ ಮಾಡಿದ ನಾಲ್ಕನೇ ರಾಷ್ಟ್ರ ಎಂಬ ಹೆಗ್ಗಳಿಕೆ ಭಾರತಕ್ಕೆ ಲಭಿಸಿದೆ ಎಂದು ತಿಳಿಸಿದರು.

ಧ್ವನಿ– ಪ್ರಧಾನಮಂತ್ರಿ ( 36 ಸೆಕೆಂದುಗಳು)

<><><>

ಸುಡುವ ಬಿಸಿಲಿರಲಿ, ಕೊರೆವ ಚಳಿಯಿರಲಿ, ಮಳೆಯನ್ನು ಲೆಕ್ಕಿಸದೇ ಎಂತಹಾ ಸನ್ನಿವೇಶದಲ್ಲೂ ‘ದೇಶ ಮೊದಲು’ ಎಂದು ಗಡಿ ಕಾಯುವ ಯೋಧರು ನಮ್ಮ ಹೆಮ್ಮೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಸೇವೆಯಲ್ಲಿ ಕಾರ್ಯನಿರತವಾಗಿರುವ 31 ವೀರ ಯೋಧರ ಕುಟುಂಬಸ್ಥರಿಗೆ ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ‘ವೀರ ನಮನ’ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಮಾತನಾಡಿದ ಅವರು, ಇಡೀ ದೇಶದ ಜನತೆಯ ನೆಮ್ಮದಿಯ ಜೀವನ, ಸುಖನಿದ್ರೆಯ ಹಿಂದೆ ದೇಶದ ಪ್ರತಿಯೊಬ್ಬ ಯೋಧನ ತ್ಯಾಗವಿದೆ ಎಂದರು.

<><><>

"ಯೋಜನೆ ಒಂದು ಅಭಿವೃದ್ಧಿಯ ಆಯಾಮ ಹಲವು" ಎನ್ನುವುದಕ್ಕೆ ನರೇಗಾ ಯೋಜನೆ ಅತ್ಯುತ್ತಮ ಉದಾಹರಣೆ. ನರೇಗಾ ಯೋಜನೆ ಗ್ರಾಮೀಣ ಕರ್ನಾಟಕದ ಅಭಿವೃದ್ಧಿಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಗ್ರಾಮೀಣ ಸರ್ಕಾರಿ ಶಾಲೆಗಳ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ನರೇಗಾ ಯೋಜನೆ ಮಹತ್ವದ ಕೊಡುಗೆ ನೀಡಿದೆ. 2023-24 ನೇ ಸಾಲಿನಿಂದ ಈವರೆಗೆ, 3 ಸಾವಿರದ 610 ಶಾಲೆಗಳ ಕಾಂಪೌಂಡ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ; 2 ಸಾವಿರದ 186 ಸುಸಜ್ಜಿತ ಆಟದ ಮೈದಾನ, 658 ಅಡುಗೆ ಕೋಣೆ, 2 ಸಾವಿರದ 780 ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಶಾಲೆಗಳ ಗುಣಮಟ್ಟ ಹೆಚ್ಚಿಸುತ್ತಿರುವ ನರೇಗಾ ಯೋಜನೆಯಿಂದ ಪೋ ಕರ ಬದುಕು ಗಟ್ಟಿಗೊಳ್ಳುತ್ತಿದೆ. ಅವರ ಮಕ್ಕಳ ಭವಿ ್ಯವೂ ಸುಭದ್ರವಾಗುತ್ತಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ತಿಳಿಸಿದ್ದಾರೆ.

<><><>

ಗ್ರಾಮೀಣ ಕ್ರೀಡೆಗಳು ನಮ್ಮ ಸಂಸ್ಕೃತಿಯ ಅರಿವನ್ನು ತಂದು ಕೊಡುವ ಮತ್ತು ಸೌಹಾರ್ದತೆಯನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರವಹಿಸುತ್ತದೆ ಎಂದು ಲೋಕೋಪಯೋಗಿ ಖಾತೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಬೆಳಗಾವಿ ತಾಲೂಕಿನ ಯಳ್ಳೂರ ಗ್ರಾಮದಲ್ಲಿ ಗ್ರಾಮೀಣ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಕ್ರೀಡೆ ಯುವಜನತೆಯಲ್ಲಿ ಉತ್ಸಾಹ ತುಂಬಲಿದೆ. ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಲು ತಮ್ಮ ಸರಕಾರ ಬದ್ಧವಾಗಿದೆ ಎಂದರು.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಆಕಾಶವಾಣಿ ಸುದ್ದಿಗಳಿಗಾಗಿ, ನಮ್ಮ **x** ಖಾತೆ **@airnews_dharwad** ಹಾಗೂ

ನಮ್ಮ ಫೇಸ್ಬುಕ್ ಖಾತೆ **Airrnu Dharwad** ಅನುಸರಿಸಿ.

<><><>

ರಾಜ್ಯಾದ್ಯಂತ ಸಾವಿರಾರು ಬಡ ಕುಟುಂಬಗಳು ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆಗಳು ವರದಿ ಆಗುತ್ತಿದೆ ಎಂದು ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಗೃಹ, ಹಣಕಾಸು ಹಾಗೂ ಕಾನೂನು ಇಲಾಖೆಯ ಹಿರಿಯ ಅಧಿಕಾರಿಗಳನ್ನು ಒಳಗೊಂಡ ಒಂದು ಜಂಟಿ ಸಮಿತಿ ರಚಿಸಿ, ಆ ಮೂಲಕ ಈ ಅಮಾಯಕ ಬಡ ಕುಟುಂಬಗಳನ್ನು ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳದಿಂದ ರಕ್ಷಿಸುವ ಮಾರ್ಗೋಪಾಯ ಕಂಡುಕೊಳ್ಳಬೇಕು ಮತ್ತು ಕೇಂದ್ರ ಹಣಕಾಸು ಇಲಾಖೆ ಹಾಗು ಆರ್‌ಬಿಐ ಜೊತೆ ಚರ್ಚಿಸಿ, ಮೈಕ್ರೋ ಫೈನಾನ್ಸ್ ಕಂಪನಿಗಳ ದಬ್ಬಾಳಿಕೆ ನಿಯಂತ್ರಿಸಲು ಶಾಶ್ವತ ಪರಿಹಾರ ಕಂಡುಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಒತ್ತಾಯಿಸಿದ್ದಾರೆ.

<><><>

ತುಬಚಿ-ಬಬಲೇಶ್ವರ ಏತ ನೀರಾವರಿ ಯೋಜನೆಯ ಪಶ್ಚಿಮ ಕಾಲುವೆಯ 7 ಮತ್ತು 8 ರ ವಿತರಣಾ ಕಾಲುವೆಗಳಲ್ಲಿ ಮೇಲುಸೇತುವೆ ಮೂಲಕ ನೀರು ಹರಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಹಿನ್ನೆಲೆಯಲ್ಲಿ, ಕಳ್ಳಕವಟಗಿ, ಗೊಣಸಿಗಿ ಮತ್ತು ಅಳಗಿನಾಳ ಗ್ರಾಮಗಳಿಗೆ ನೀರಿನ ಹರಿವು ಆರಂಭಿಸಲಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಈ ಭಾಗದ ಬಹುದಿನಗಳ ಬೇಡಿಕೆ ಈಡೇರಿದ್ದು, ಕೃಷಿ ಚಟುವಟಿಕೆಗಳಿಗೆ ಅಗತ್ಯದ ನೀರು ದೊರೆತು ರೈತರು ಸಂತಸಗೊಂಡಿದ್ದಾರೆ.ನಮ್ಮೆಲ್ಲ ಅನ್ನದಾತರ ಹೊಲಗಳು ಹಸಿರಾಗಲಿ ಎಂದು ಹಾರೈಸಿದ್ದಾರೆ.

<><><>

ನವದೆಹಲಿಯ ಇಂದಿರಾಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಚೊಚ್ಚಲ ಖೊ-ಖೊ ವಿಶ್ವಕಪ್ ನಲ್ಲಿ ಭಾರತೀಯ ಮಹಿಳೆಯರ ಹಾಗೂ ಪುರುಷರ ತಂಡಗಳು ಫೈನಲ್ ಪಂದ್ಯಗಳನ್ನು ಗೆದ್ದು ಚಾಂಪಿಯನ್ ಪಟ್ಟ ಅಲಂಕರಿಸಿವೆ. ಭಾರತೀಯ ಮಹಿಳಾ ತಂಡವು ನೇಪಾಳ ತಂಡವನ್ನು 78-40 ಅಂಕಗಳಿಂದ ಮಣಿಸಿತು. ರಾಜ್ಯದ ಚೈತ್ರಾ. ಬಿ ಅಮೋಘ ಆಟವನ್ನು ಪ್ರದರ್ಶಿಸಿದರು. ಭಾರತದ ಪುರುಷರ ತಂಡವು ನೇಪಾಳ ತಂಡವನ್ನು 54-36 ಅಂಕಗಳ

ಅಂತರದಿಂದ ಮಣಿಸಿ, ಪ್ರತಿಷ್ಠಿತ ಕಪ್ ಜಯಿಸಿತು. ಪ್ರಪ್ರಥಮ ಖೋ–ಖೋ ವಿಶ್ವಕಪ್ ಜಯಿಸಿದ ಭಾರತದ ಎರಡೂ ತಂಡಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಅಭಿನಂದಿಸಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಅಭಿನಂದಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಚೊಚ್ಚಲ ಖೊ–ಖೊ ವಿಶ್ವಕಪ್ ನಲ್ಲಿ ಭಾರತೀಯ ತಂಡಗಳ ಅಮೋಘ ಸಾಧನೆ ಇತಿಹಾಸದ ಪುಟಗಳಲ್ಲಿ ಶಾಶ್ವತವಾಗಿ ಉಳಿಯಲಿದೆ. ಮೈಸೂರು ಜಿಲ್ಲೆಯ ಟಿ.ನರಸೀಪುರ ತಾಲೂಕಿನ ಕುರುಬೂರಿನ ಯುವತಿ ಚೈತ್ರಾ. ಬಿ ಅವರು ವಿಶ್ವವಿಜೇತ ಮಹಿಳಾ ಖೊ–ಖೊ ತಂಡದ ಭಾಗವಾಗಿರುವುದು ನಾಡಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದರು. ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ, ಭಾರತೀಯ ತಂಡಗಳಿಗೆ ಅಭಿನಂದನೆ ಸಲ್ಲಿಸಿದ್ದು, ಚೊಚ್ಚಲ ವಿಶ್ವ ಕಪ್ ಗೆದ್ದಿರುವುದು ಹೆಮ್ಮೆಯ ಸಂಗತಿಯಾಗಿದೆ. ಇದು ಮುಂಬರುವ ತಲೆಮಾರಿಗೆ ಸ್ಫೂರ್ತಿಯಾಗಿದೆ ಎಂದು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ತಿಳಿಸಿದ್ದಾರೆ. ವಿಶ್ವಕಪ್ ಖೋ ಖೋ ಫೈನಲ್ ಪಂದ್ಯಾವಳಿಯಲ್ಲಿ ಜಯಗಳಿಸಿ ಭಾರತಕ್ಕೆ ವಿಶ್ವಕಪ್ ತಂದುಕೊಟ್ಟ ಹೆಮ್ಮೆಯ ಯುವತಿಯರ ತಂಡಕ್ಕೆ ಹಾರ್ದಿಕ ಅಭಿನಂದನೆಗಳು. ಇನ್ನು ಈ ಪಂದ್ಯಾವಳಿಯಲ್ಲಿ ಭಾಗವಹಿಸಿ ದೇಶದ ಕೀರ್ತಿ ಹೆಚ್ಚಿಸಿದ ನಮ್ಮ ಟಿ. ನರಸೀಪುರ ಕ್ಷೇತ್ರದ ಕುರುಬೂರು ಗ್ರಾಮದ ಕ್ರೀಡಾಪಟು ಚೈತ್ರ ಅವರ ಸಾಧನೆಗೆ ಸಚಿವ ಎಚ್.ಸಿ.ಮಹದೇವಪ್ಪ ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ವಿಜ್ಞಾನದ ಬಗ್ಗೆ ಆಸಕ್ತಿ ಬೆಳೆಸುವುದರ ಜೊತೆಗೆ ವಿಜ್ಞಾನ ಅಧ್ಯಯನ ಹಾಗೂ ಸಂಶೋಧನೆಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ರಾಜ್ಯ ಸರಕಾರ ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರ ಹಾಗೂ ತಾರಾಲಯ ನಿರ್ಮಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಯೋಜನೆಗಳಡಿ, ಇಂದು ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಜಲಾಶಯದ ಆವರಣದಲ್ಲಿ ಬೆಳಗಾವಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ಮಿನಿ ತಾರಾಲಯಕ್ಕೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ.

<><><>

ವಿರಹದ ಶಾಪವನ್ನು ಪಡೆದ ಯಕ್ಷನೊಬ್ಬನ ಕಲ್ಪನಾ ವಿಲಾಸವೇ ಕಾಳಿದಾಸನ ಮೇಘದೂತ. ಈ ಕಾವ್ಯಕ್ಕೆ ವಸ್ತು, ಕತೆ ಎಂಬುದಿಲ್ಲ. ಅನೇಕರು ಕನ್ನಡಕ್ಕೆ ಇದನ್ನು ಅನುವಾದಿಸಿದರು. ಅದರಲ್ಲಿ ಮೊದಲಿಗರು ಶಾಂತ ಕವಿಗಳು ಎಂಬುದು ಹೆಮ್ಮೆಯ ವಿಚಾರ ಎಂದು ವಿದ್ವಾಂಸ, ಡಾಕ್ಟರ್ ಶ್ರೀರಾಮ ಭಟ್ ಹೇಳಿದ್ದಾರೆ. ಧಾರವಾಡದಲ್ಲಿ ರಂಗಾಯಣ ಹಾಗೂ ಸಕ್ಕರಿ ಬಾಳಾಚಾರ್ ಟ್ರಸ್ಟ್ ಸಹಯೋಗದಲ್ಲಿ ಆಯೋಜಿಸಿದ್ದ ಕನ್ನಡದ ಆದ್ಯ ನಾಟಕಕಾರ ಹಾಗೂ ಕೀರ್ತನಕಾರ ಸಕ್ಕರಿ ಬಾಳಾಚಾರ್ಯ "ಶಾಂತಕವಿ" ಅವರ 169ನೇ ಜನ್ಮದಿನೋತ್ಸವದ ಅಂಗವಾಗಿ 2025ರ ದಿನದರ್ಶಿಕೆ ಬಿಡುಗಡೆಗೊಳಿಸಿ, ಅವರು ಮಾತನಾಡಿದರು.

<><><>